Re. No. D. 221

# भारत का राजपत्र
# The Gazette of India
# ಭಾರತ ರಾಜ ಪತ್ರ

( EXTRAORDINARY )
( ವಿಶೇಷ ಸಂಚಿಕೆ )

भाग IX अनुभाग 1
PART IX SECTION 1
ಭಾಗ IX ವಿಭಾಗ 1

प्राधिकार से प्रकाशित
Published by Authority
ಪ್ರಾಧಿಕಾರದ ಮೇರೆಗೆ ಪ್ರಕಟಿಸಲಾಗಿದೆ.

| | | | |
|---|---|---|---|
| सं. १ | नई दिल्ली, शुक्रवार, एप्रील ६, २०१२ | वैशाक १७, १९३४ (शका) | खंड. ४८ |
| No. 1 | New Delhi, Friday, April 6, 2012 | Vaishakha 17, 1934 (Saka) | Vol. 48 |
| ಸಂ. ೧ | ನವ ದೆಹಲಿ, ಶುಕ್ರವಾರ, ಏಪ್ರಿಲ್ ೬, ೨೦೧೨ | ವೈಶಾಖ ೧೭, ೧೯೩೪ (ಶಕ) | ಸಂಪುಟ. ೪೮ |

**Ministry of Law and Justice**
(Legislative Department)
New Delhi, 6th April, 2012

**ಕಾನೂನು ಮತ್ತು ನ್ಯಾಯ ಮಂತ್ರಾಲಯ**
**(ವಿಧಾಯೀ ಇಲಾಖೆ)**
**ನವದೆಹಲಿ, 6ನೇ ಏಪ್ರಿಲ್, 2012**

The Translation in Kannada of the following Acts, namely :- (1) The Energy Conservation Act, 2001 (2) The Haj Committee Act, 2002 (3) The Multi-State Co-operative Societies Act, 2002 (4) The Central Educational Institutions (Reservation in Admission) Act, 2006 (5) The Government Securities Act, 2006 (6) The Science and Engineering Research Board Act, 2008 (7) The Unorganised Workers Social Security Act, 2008 (8) The National Investigation Agency Act, 2008 and (9) The Right of Children to Free and Compulsory Education Act, 2009 - are hereby published under the authority of the President and shall be deemed to be authoritative text thereof in Kannada under clause (a) of section 2 of the Authoritative Texts (Central Laws) Act, 1973 (50 of 1973).

ಈ ಕೆಳಕಂಡ ಅಧಿನಿಯಮ ಎಂದರೆ:- (1) ಇಂಧನ ಶಕ್ತಿ ಸಂರಕ್ಷಣಾ ಅಧಿನಿಯಮ, 2001 (2) ಹಜ್ ಸಮಿತಿ ಅಧಿನಿಯಮ, 2002 (3) ಬಹು-ರಾಜ್ಯ ಸಹಕಾರಿ ಸೊಸೈಟಿಗಳ ಅಧಿನಿಯಮ, 2002 (4) ಕೇಂದ್ರೀಯ ಶಿಕ್ಷಣ ಸಂಸ್ಥೆಗಳ (ಪ್ರವೇಶದಲ್ಲಿ ಮೀಸಲಾತಿ) ಅಧಿನಿಯಮ, 2006 (5) ಸರ್ಕಾರಿ ಭದ್ರತಾ ಪತ್ರಗಳ ಅಧಿನಿಯಮ, 2006 (6) ವಿಜ್ಞಾನ ಮತ್ತು ಇಂಜಿನಿಯರಿಂಗ್ ಸಂಶೋಧನಾ ಮಂಡಳಿ ಅಧಿನಿಯಮ, 2008 (7) ಅಸಂಘಟಿತ ಕೆಲಸಗಾರರ ಸಾಮಾಜಿಕ ಭದ್ರತಾ ಅಧಿನಿಯಮ, 2008 (8) ರಾಷ್ಟ್ರೀಯ ತನಿಖಾ ಏಜೆನ್ಸಿ ಅಧಿನಿಯಮ, 2008 ಮತ್ತು (9) ಉಚಿತ ಮತ್ತು ಕಡ್ಡಾಯ ಶಿಕ್ಷಣ ಪಡೆಯಲು ಮಕ್ಕಳ ಹಕ್ಕು ಅಧಿನಿಯಮ, 2009 - ಇವುಗಳ ಕನ್ನಡ ಭಾಷಾಂತರವನ್ನು ರಾಷ್ಟ್ರಪತಿಯವರ ಪ್ರಾಧಿಕಾರದ ಮೇರೆಗೆ ಪ್ರಕಟಿಸಲಾಗಿದೆ ಮತ್ತು ಅಧಿಕೃತ ಪಾಠಗಳ (ಕೇಂದ್ರ ಕಾನೂನುಗಳು) ಅಧಿನಿಯಮ, 1973 (1973ರ 50)ರ 2ನೇ ಪ್ರಕರಣದ (ಎ) ಖಂಡದ ಮೇರೆಗೆ ಇದನ್ನು ಈ ಅಧಿನಿಯಮದ ಅಧಿಕೃತ ಕನ್ನಡ ಪಾಠವೆಂದು ಭಾವಿಸತಕ್ಕದ್ದು.

172 done

# ವಿಜ್ಞಾನ ಮತ್ತು ಇಂಜನಿಯರಿಂಗ್ ಸಂಶೋಧನಾ ಮಂಡಳಿ ಅಧಿನಿಯಮ, 2008

**[2009ರ ಸಂಖ್ಯೆ 9]**

The Science and Engineering Research Board Act, 2008

[17ನೇ ಜನವರಿ, 2009]

ವಿಜ್ಞಾನ ಮತ್ತು ಇಂಜನಿಯರಿಂಗ್‌ನಲ್ಲಿ ಮೂಲ ಸಂಶೋಧನೆಗೆ ಉತ್ತೇಜನ ನೀಡುವುದಕ್ಕಾಗಿ ಒಂದು ಮಂಡಳಿಯನ್ನು ರಚಿಸಲು ಮತ್ತು ಅಂಥ ಸಂಶೋಧನೆಯಲ್ಲಿ ತೊಡಗಿರುವ ವ್ಯಕ್ತಿಗಳಿಗೆ, ಅಂಥ ಸಂಶೋಧನೆಗಾಗಿ ಶೈಕ್ಷಣಿಕ ಸಂಸ್ಥೆಗಳಿಗೆ, ಸಂಶೋಧನಾ ಮತ್ತು ಅಭಿವೃದ್ಧಿ ಪ್ರಯೋಗಾಲಯಗಳಿಗೆ, ಕೈಗಾರಿಕಾ ಸಂಸ್ಥೆಗಳಿಗೆ ಮತ್ತು ಇತರ ಏಜೆನ್ಸಿಗಳಿಗೆ ಹಣಕಾಸು ನೆರವು ಒದಗಿಸಲು ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗೆ ಉಪಬಂಧ ಕಲ್ಪಿಸುವ ಅಧಿನಿಯಮ.

ಇದು ಭಾರತ ಗಣರಾಜ್ಯದ ಐವತ್ತೊಂಬತ್ತನೇ ವರ್ಷದಲ್ಲಿ ಸಂಸತ್ತಿನಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು:–

## ಅಧ್ಯಾಯ – I

## ಪ್ರಾರಂಭಿಕ

**1. ಚಿಕ್ಕ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ವಿಜ್ಞಾನ ಮತ್ತು ಇಂಜನಿಯರಿಂಗ್ ಸಂಶೋಧನಾ ಮಂಡಳಿ ಅಧಿನಿಯಮ, 2008 ಎಂದು ಕರೆಯತಕ್ಕದ್ದು.

(2) ಇದು, ಕೇಂದ್ರ ಸರ್ಕಾರವು ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) "ಮಂಡಳಿ" ಎಂದರೆ, 3ನೇ ಪ್ರಕರಣದ (1)ನೇ ಉಪ ಪ್ರಕರಣದ ಮೇರೆಗೆ ರಚಿಸಿದ ವಿಜ್ಞಾನ ಮತ್ತು ಇಂಜನಿಯರಿಂಗ್ ಸಂಶೋಧನಾ ಮಂಡಳಿ;

(ಬಿ) "ಅಧ್ಯಕ್ಷ" ಎಂದರೆ, ಮಂಡಳಿಯ ಅಧ್ಯಕ್ಷ;

(ಸಿ) "ನಿಧಿ" ಎಂದರೆ, 10ನೇ ಪ್ರಕರಣದ (1)ನೇ ಉಪ–ಪ್ರಕರಣದ ಮೇರೆಗೆ ರಚಿಸಿದ ವಿಜ್ಞಾನ ಮತ್ತು ಇಂಜನಿಯರಿಂಗ್ ಸಂಶೋಧನಾ ನಿಧಿ;

(ಡಿ) "ಸದಸ್ಯ" ಎಂದರೆ, ಮಂಡಳಿಯ ಸದಸ್ಯ ಮತ್ತು ಅಧ್ಯಕ್ಷನೂ ಒಳಗೊಳ್ಳುತ್ತಾನೆ;

(ಇ) "ಮೇಲುಸ್ತುವಾರಿ ಸಮಿತಿ" ಎಂದರೆ, 5ನೇ ಪ್ರಕರಣದ (1)ನೇ ಉಪಪ್ರಕರಣದ ಮೇರೆಗೆ ರಚಿಸಿದ ಮೇಲುಸ್ತುವಾರಿ ತಜ್ಞರ ಸಮಿತಿ;

(ಎಫ್) "ನಿಯಮಿಸಿದ" ಎಂದರೆ ಈ ಅಧಿನಿಯಮದ ಮೇರೆಗೆ ರಚಿಸಿದ ನಿಯಮಗಳ ಮೂಲಕ ನಿಯಮಿಸಲಾದುದು;

(ಜಿ) "ಕಾರ್ಯದರ್ಶಿ" ಎಂದರೆ 4ನೇ ಪ್ರಕರಣದ (1)ನೇ ಉಪ ಪ್ರಕರಣದ ಮೇರೆಗೆ ನೇಮಕಗೊಂಡ ಮಂಡಳಿಯ ಕಾರ್ಯದರ್ಶಿ.

## ಅಧ್ಯಾಯ – II

## ವಿಜ್ಞಾನ ಮತ್ತು ಇಂಜಿನಿಯರಿಂಗ್ ಸಂಶೋಧನಾ ಮಂಡಳಿ

**3. ಮಂಡಳಿಯ ರಚನೆ ಮತ್ತು ನಿಗಮನ.–** ಈ ಅಧಿನಿಯಮದ ಉದ್ದೇಶಗಳಿಗಾಗಿ ಕೇಂದ್ರ ಸರ್ಕಾರವು ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ, ವಿಜ್ಞಾನ ಮತ್ತು ಇಂಜಿನಿಯರಿಂಗ್ ಸಂಶೋಧನಾ ಮಂಡಳಿ ಎಂದು ಕರೆಯಲಾಗುವ ಒಂದು ಮಂಡಳಿಯನ್ನು ರಚಿಸತಕ್ಕದ್ದು.

(2) ಮಂಡಳಿಯು, ಮೇಲೆ ಹೇಳಿದ ಹೆಸರಿನ, ಶಾಶ್ವತ ಉತ್ತರಾಧಿಕಾರ ಹಾಗೂ ಸಾಮಾನ್ಯ ಮೊಹರನ್ನು ಹೊಂದಿರುವ ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಕರಾರು ಮಾಡಿಕೊಳ್ಳಲು ಅಧಿಕಾರ ಹೊಂದಿರತಕ್ಕದ್ದು. ಹಾಗೂ ಅದು ಸದರಿ ಹೆಸರಿನಲ್ಲಿ ದಾವೆಯನ್ನು ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(3) ಮಂಡಳಿಯು ಈ ಮುಂದಿನ ವ್ಯಕ್ತಿಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:–

(ಎ) ಭಾರತ ಸರ್ಕಾರದ ಕಾರ್ಯದರ್ಶಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಪದನಿಮಿತ್ತ– ಅಧ್ಯಕ್ಷ;

(ಬಿ) ಸದಸ್ಯ ಕಾರ್ಯದರ್ಶಿ, ಯೋಜನಾ ಆಯೋಗ, ಪದನಿಮಿತ್ತ – ಸದಸ್ಯ ;

(ಸಿ) ಭಾರತ ಸರ್ಕಾರದ ಕಾರ್ಯದರ್ಶಿ, ಜೈವಿಕ ತಂತ್ರಜ್ಞಾನ ಇಲಾಖೆ, ಪದನಿಮಿತ್ತ– ಸದಸ್ಯ;

(ಡಿ) ಭಾರತ ಸರ್ಕಾರದ ಕಾರ್ಯದರ್ಶಿ, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಇಲಾಖೆ, ಪದನಿಮಿತ್ತ–ಸದಸ್ಯ;

(ಇ) ಭಾರತ ಸರ್ಕಾರದ ಕಾರ್ಯದರ್ಶಿ, ಭೂ ವಿಜ್ಞಾನಗಳ ಮಂತ್ರಾಲಯ, ಪದನಿಮಿತ್ತ – ಸದಸ್ಯ;

(ಎಫ್) ಭಾರತ ಸರ್ಕಾರದ ಕಾರ್ಯದರ್ಶಿ, ವೆಚ್ಚ ಇಲಾಖೆ, ಆರ್ಥಿಕ ಮಂತ್ರಾಲಯ ಅಥವಾ ಅವರ ನಾಮ ನಿರ್ದೇಶಿತ, ಪದನಿಮಿತ್ತ–ಸದಸ್ಯ;

(ಜಿ) ಭಾರತ ಸರ್ಕಾರದ ಕಾರ್ಯದರ್ಶಿ, ಆರೋಗ್ಯ ಸಂಶೋಧನಾ ಇಲಾಖೆ, ಪದನಿಮಿತ್ತ– ಸದಸ್ಯ;

(ಎಚ್) ಶೈಕ್ಷಣಿಕ ಸಂಸ್ಥೆಗಳಲ್ಲಿ ವಿವಿಧ ವಿಷಯಗಳಲ್ಲಿ ವೈಜ್ಞಾನಿಕ ಸಂಶೋಧನೆಯಲ್ಲಿ ಅನುಭವ ಹೊಂದಿರುವ ವ್ಯಕ್ತಿಗಳ ಪೈಕಿ ಕೇಂದ್ರ ಸರ್ಕಾರವು ನೇಮಕ ಮಾಡುವ ಮೂವರಿಗಿಂತ ಹೆಚ್ಚಿಲ್ಲದ ಸದಸ್ಯರು;

(ಐ) ಸರ್ಕಾರಿ ಸಂಶೋಧನಾ ಪ್ರಯೋಗಾಲಯಗಳಲ್ಲಿ ವಿವಿಧ ವಿಷಯಗಳಲ್ಲಿ ವೈಜ್ಞಾನಿಕ ಸಂಶೋಧನೆಯಲ್ಲಿ ಅನುಭವ ಹೊಂದಿರುವ ವ್ಯಕ್ತಿಗಳ ಪೈಕಿ ಕೇಂದ್ರ ಸರ್ಕಾರವು ನೇಮಕ ಮಾಡುವ ಮೂವರಿಗಿಂತ ಹೆಚ್ಚಿಲ್ಲದ ಸದಸ್ಯರು;

(ಜೆ) ಕೈಗಾರಿಕೆಯಲ್ಲಿ, ಅಂತರರಾಷ್ಟ್ರೀಯ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರಾಜೆಕ್ಟ್‌ಗಳಲ್ಲಿ, ಸಾಮಾಜಿಕ - ಆರ್ಥಿಕ ವಲಯಗಳಲ್ಲಿ ಮತ್ತು ಸರ್ಕಾರದ ಇತರ ಸಂಶೋಧನಾ ಪ್ರಯೋಗಾಲಯಗಳಲ್ಲಿ ವಿವಿಧ ವಿಷಯಗಳಲ್ಲಿ ವೈಜ್ಞಾನಿಕ ಸಂಶೋಧನೆಯಲ್ಲಿ ಅನುಭವ ಹೊಂದಿರುವ ವ್ಯಕ್ತಿಗಳ ಪೈಕಿ ಕೇಂದ್ರ ಸರ್ಕಾರವು ನೇಮಕ ಮಾಡುವ ನಾಲ್ವರಿಗಿಂತ ಹೆಚ್ಚಿಲ್ಲದ ಸದಸ್ಯರು.

(4) ಮಂಡಳಿಯ ಕೇಂದ್ರ ಕಚೇರಿಯು, ದೆಹಲಿಯಲ್ಲಿ ಅಥವಾ ರಾಷ್ಟ್ರದ ರಾಜಧಾನಿ ಪ್ರದೇಶದಲ್ಲಿರತಕ್ಕದ್ದು.

(5) (3)ನೇ ಉಪ ಪ್ರಕರಣದ (ಹೆಚ್) ನಿಂದ (ಜೆ) ವರೆಗಿನ ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸದಸ್ಯರ ಅರ್ಹತೆಗಳು ಮತ್ತು ಅನುಭವ, ಪದಾವಧಿ ಹಾಗೂ ಭತ್ಯೆಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

(6) ಅಧ್ಯಕ್ಷರು ಮಂಡಳಿಯ ಸಭೆಗಳ ಅಧ್ಯಕ್ಷತೆ ವಹಿಸುವುದರ ಜೊತೆಗೆ ಮಂಡಳಿಯು, ನಿಯಮಿಸಬಹುದಾದಂಥ ಅಥವಾ ಅದು ತನಗೆ ಪ್ರತ್ಯಾಯೋಜಿಸಬಹುದಾದಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(7) ಮಂಡಳಿಯ ಯಾವುದೇ ಕಾರ್ಯವು ಅಥವಾ ವ್ಯವಹರಣೆಯು,-

(ಎ) ಮಂಡಳಿಯಲ್ಲಿ ಯಾವುದೇ ಖಾಲಿ ಸ್ಥಾನ ಇರುವ ಅಥವಾ ಅದರ ರಚನೆಯಲ್ಲಿನ ಯಾವುದೇ ನ್ಯೂನ್ಯತೆಯು; ಅಥವಾ

(ಬಿ) ಮಂಡಳಿಯ ಸದಸ್ಯನಾಗಿ ಕಾರ್ಯ ನಿರ್ವಹಿಸುತ್ತಿರುವ ವ್ಯಕ್ತಿಯ ನೇಮಕದಲ್ಲಿನ ಯಾವುದೇ ನ್ಯೂನ್ಯತೆಯು; ಅಥವಾ

(ಸಿ) ಪ್ರಕರಣದ ಗುಣಾವಗುಣಗಳಿಗೆ ಬಾಧಕವಾಗದ ಮಂಡಳಿಯ ಕಾರ್ಯವಿಧಾನದಲ್ಲಿನ ಯಾವುದೇ ಕ್ರಮದೋಷದ

- ಕಾರಣ ಮಾತ್ರದಿಂದಲೇ ಅಸಿಂಧುವಾಗತಕ್ಕದ್ದಲ್ಲ.

**4. ಮಂಡಳಿಯ ಕಾರ್ಯದರ್ಶಿ ಮತ್ತು ಇತರ ಅಧಿಕಾರಿಗಳು ಹಾಗೂ ನೌಕರರು.-** (1) ಮಂಡಳಿಯು, ಕೇಂದ್ರ ಸರ್ಕಾರದೊಂದಿಗೆ ಸಮಾಲೋಚಿಸಿ, ಭಾರತ ಸರ್ಕಾರದ ಅಡಿಷನಲ್ ಕಾರ್ಯದರ್ಶಿಯ ದರ್ಜೆಗಿಂತ ಕಡಿಮೆಯಿರದ ಪ್ರಖ್ಯಾತ ವಿಜ್ಞಾನಿಯೊಬ್ಬನನ್ನು ಮಂಡಳಿಯ ಕಾರ್ಯದರ್ಶಿಯನ್ನಾಗಿ ನೇಮಕ ಮಾಡಬಹುದು.

(2) ಮಂಡಳಿಯು, ಈ ಅಧಿನಿಯಮದ ಮೇರೆಗೆ ತನ್ನ ಪ್ರಕಾರ್ಯಗಳ ದಕ್ಷ ನಿರ್ವಹಣೆಗಾಗಿ ತಾನು ಅವಶ್ಯವೆಂದು ಪರಿಗಣಿಸಬಹುದಾದಂಥ ಇತರ ಅಧಿಕಾರಿಗಳನ್ನು ಮತ್ತು ನೌಕರರನ್ನು ನೇಮಕ ಮಾಡಿಕೊಳ್ಳಬಹುದು.

(3) ಮಂಡಳಿಯ ಕಾರ್ಯದರ್ಶಿಯ ಮತ್ತು ಇತರ ಅಧಿಕಾರಿಗಳ ಹಾಗೂ ನೌಕರರ ಸಂಬಳ ಮತ್ತು ಭತ್ಯೆಗಳೂ ಸೇರಿದಂತೆ ಅವರ ವಿದ್ಯಾರ್ಹತೆ ಮತ್ತು ಅನುಭವ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಮಂಡಳಿಯು ರಚಿಸಿದ ವಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ಮಂಡಳಿಯು ತಾನು ರಚಿಸಿದ ವಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳ ಮತ್ತು ಷರತ್ತುಗಳ ಹಾಗೂ ಸಂಭಾವನೆಗಳ ಮೇಲೆ ಸಮಾಲೋಚಕರಾಗಿ, ದೇಶದ ಮತ್ತು ವಿದೇಶದ ಸಿಬ್ಬಂದಿಯ ಸೇವೆಯನ್ನು, ಸಂದರ್ಶಕ ವಿಜ್ಞಾನಿಗಳನ್ನು ನಿಯೋಜಿಸಿಕೊಳ್ಳಬಹುದು ಮತ್ತು ದೇಶದೊಳಗೆ ಅವರ ಕಾರ್ಯನಿರ್ವಹಣೆಗೆ ಅನುಕೂಲ ಕಲ್ಪಿಸತಕ್ಕದ್ದು.

**5. ಮೇಲುಸ್ತುವಾರಿ ತಜ್ಞರ ಸಮಿತಿ.–** (1) ಈ ಬಗ್ಗೆ ರಚಿಸಿದ ನಿಯಮಗಳಿಗೊಳಪಟ್ಟು, ಮಂಡಳಿಯು ತನಗೆ ಸಲಹೆ ಮತ್ತು ನೆರವು ನೀಡಲು ತಜ್ಞರು, ಪ್ರಖ್ಯಾತ ವಿಜ್ಞಾನಿಗಳು ಮತ್ತು ಶಿಕ್ಷಣ ತಜ್ಞರನ್ನು ಒಳಗೊಂಡ ಒಂದು ಮೇಲುಸ್ತುವಾರಿ ತಜ್ಞರ ಸಮಿತಿಯನ್ನು ರಚಿಸತಕ್ಕದ್ದು.

(2) ಮೇಲುಸ್ತುವಾರಿ ಸಮಿತಿಯು, ಈ ಮುಂದಿನ ವ್ಯಕ್ತಿಗಳನ್ನು ಒಳಗೊಂಡಿರತಕ್ಕದ್ದು, ಎಂದರೆ:-

(i) ಪ್ರಖ್ಯಾತ ಮತ್ತು ಅಂತಾರಾಷ್ಟ್ರೀಯ ಖ್ಯಾತಿಯ ಒಬ್ಬ ವಿಜ್ಞಾನಿ – ಅಧ್ಯಕ್ಷ;

(ii) ಭಾರತ ಸರ್ಕಾರದ ಕಾರ್ಯದರ್ಶಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ –ಪದನಿಮಿತ್ತ ಉಪಾಧ್ಯಕ್ಷ;

(iii) ಭಾರತೀಯ ರಾಷ್ಟ್ರೀಯ ವಿಜ್ಞಾನ ಅಕಾಡೆಮಿಯ, ಭಾರತೀಯ ವಿಜ್ಞಾನಗಳ ಅಕಾಡೆಮಿಯ ಮತ್ತು ಭಾರತೀಯ ರಾಷ್ಟ್ರೀಯ ಇಂಜಿನಿಯರಿಂಗ್ ಅಕಾಡೆಮಿಯ ಅಧ್ಯಕ್ಷರುಗಳು, ಪದನಿಮಿತ್ತ-ಸದಸ್ಯರುಗಳು;

(iv) ವಿಜ್ಞಾನ ಮತ್ತು ತಂತ್ರಜ್ಞಾನದ ವಿವಿಧ ಕ್ಷೇತ್ರಗಳಲ್ಲಿ ಪ್ರಸಿದ್ಧ ತಜ್ಞರ ಪೈಕಿ ಕೇಂದ್ರ ಸರ್ಕಾರವು ನೇಮಕ ಮಾಡುವ ಮೂವರಿಗಿಂತ ಹೆಚ್ಚಿಲ್ಲದ ಸದಸ್ಯರು;

(v) ಮಂಡಳಿಯ ಕಾರ್ಯದರ್ಶಿ, ಪದನಿಮಿತ್ತ –ಸದಸ್ಯ.

**6. ಮಂಡಳಿಯ ಸಮಿತಿಗಳು.– (1)** ಈ ಬಗ್ಗೆ ರಚಿಸಿದ ನಿಯಮಗಳಿಗೆ ಒಳಪಟ್ಟು ಮಂಡಳಿಯು, ಈ ಅಧಿನಿಯಮದ ಮೇರೆಗೆ ತನ್ನ ಕರ್ತವ್ಯಗಳ ದಕ್ಷ ನಿರ್ವಹಣೆಗಾಗಿ ಮತ್ತು ತನ್ನ ಪ್ರಕಾರ್ಯಗಳ ನೆರವೇರಿಕೆಗಾಗಿ ಅವಶ್ಯಕವಾಗಬಹುದಾದಂಥ ಸಮಿತಿಗಳನ್ನು ನೇಮಕ ಮಾಡಬಹುದು.

(2) ಮಂಡಳಿಯು, ಮಂಡಳಿಯ ಸದಸ್ಯರಲ್ಲದ ತಾನು ಸೂಕ್ತವೆಂದು ಭಾವಿಸಬಹುದಾದಷ್ಟು ಸಂಖ್ಯೆಯ ವ್ಯಕ್ತಿಗಳನ್ನು (1)ನೇ ಉಪ ಪ್ರಕರಣದ ಮೇರೆಗೆ ನೇಮಕ ಮಾಡಿದ ಯಾವುದೇ ಸಮಿತಿಯ ಸಹ ಸದಸ್ಯರನ್ನಾಗಿ ಸೇರಿಸಿಕೊಳ್ಳುವ ಅಧಿಕಾರ ಹೊಂದಿರತಕ್ಕದ್ದು ಮತ್ತು ಹಾಗೆ ಸಹ ಸದಸ್ಯನನ್ನಾಗಿ ಸೇರಿಸಿಕೊಂಡ ವ್ಯಕ್ತಿಯು ಸಮಿತಿಯ ಸಭೆಗಳಲ್ಲಿ ಹಾಜರಾಗಲು ಹಾಗೂ ಸಮಿತಿಯ ವ್ಯವಹರಣೆಗಳಲ್ಲಿ ಭಾಗವಹಿಸಲು ಹಕ್ಕು ಹೊಂದಿರತಕ್ಕದ್ದು.

**7. ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು.–** (1) ಮಂಡಳಿಯು, ವಿಜ್ಞಾನ ಮತ್ತು ಇಂಜಿನಿಯರಿಂಗ್‌ನ ಆವಿರ್ಭವಿಸುತ್ತಿರುವ ಕ್ಷೇತ್ರಗಳಲ್ಲಿ ಮೂಲ ಸಂಶೋಧನೆಯನ್ನು ಯೋಜಿಸಲು, ಪ್ರೋತ್ಸಾಹಿಸಲು ಮತ್ತು ಅದಕ್ಕೆ ನಿಧಿ ಒದಗಿಸಲು ಪ್ರಧಾನ ಬಹು – ವಿಷಯಕ ಸಂಶೋಧನೆಗೆ ನಿಧಿ ಒದಗಿಸುವ ಒಂದು ಏಜೆನ್ಸಿಯಾಗಿ ಸೇವೆ ಸಲ್ಲಿಸತಕ್ಕದ್ದು.

(2) ಮಂಡಳಿಯ ಅಧಿಕಾರಗಳು ಮತ್ತು ಪ್ರಕಾರ್ಯಗಳು, ಇತರ ವಿಷಯಗಳೊಂದಿಗೆ,-

(i) ಆವಿರ್ಭವಿಸುತ್ತಿರುವ ಕ್ಷೇತ್ರಗಳಲ್ಲಿ ಅಂತರರಾಷ್ಟ್ರೀಯ ಸ್ಪರ್ಧಾತ್ಮಕ ಸಂಶೋಧನೆಯನ್ನು ಯೋಜಿಸಲು, ಉತ್ತೇಜಿಸಲು ಮತ್ತು ಅವುಗಳಿಗೆ ನಿಧಿ ಒದಗಿಸಲು ಪ್ರಧಾನ ಬಹು ವಿಷಯಕ ಸಂಶೋಧನಾ ಏಜೆನ್ಸಿಯಾಗಿ ಸೇವೆ ಸಲ್ಲಿಸುವುದು;

(ii) ಮೇಲುಸ್ತುವಾರಿ ಸಮಿತಿಯು ಮಾಡಿದ ಶಿಫಾರಸ್ಸುಗಳನ್ನು ಮತ್ತು ನೀಡಿದ ಸಲಹೆಗಳನ್ನು ಪರಿಗಣಿಸುವುದು ಮತ್ತು ಅವುಗಳ ಮೇಲೆ ತೀರ್ಮಾನಗಳನ್ನು ತೆಗೆದುಕೊಳ್ಳುವುದು;

(iii) ಸಂಶೋಧನೆ ಕೈಗೊಳ್ಳುವುದಕ್ಕಾಗಿ ಪ್ರಮುಖ ಅಂತರ್ ವಿಷಯಕ ಸಂಶೋಧನಾ ಕ್ಷೇತ್ರಗಳನ್ನು ಮತ್ತು ವ್ಯಕ್ತಿಗಳನ್ನು, ಗುಂಪುಗಳನ್ನು ಅಥವಾ ಸಂಸ್ಥೆಗಳನ್ನು ಗುರುತಿಸುವುದು ಮತ್ತು ನಿಧಿ ಒದಗಿಸುವುದು;

(iv) ಸಂಶೋಧನೆಗೆ ಉತ್ತೇಜನ ನೀಡುವಲ್ಲಿ ಬಹುವಿಧ ಪರಿಣಾಮ ಬೀರುವಂಥ ಸಂಸ್ಥೆಗಳೂ ಸೇರಿದಂತೆ ಗುರುತಿಸಲಾದ ವಿವಿಧ ಕ್ಷೇತ್ರಗಳಲ್ಲಿ ರಾಷ್ಟ್ರಮಟ್ಟದಲ್ಲಿ ಸಮನ್ವಯ ಕಾರ್ಯಕ್ರಮಗಳನ್ನು ರೂಪಿಸುವುದು;

(v) ವೈಜ್ಞಾನಿಕ ಅನ್ವೇಷಣೆಗಾಗಿ ಮೂಲ ಸೌಕರ್ಯ ಮತ್ತು ವಾತಾವರಣ ಕಲ್ಪಿಸಲು ನೆರವು ನೀಡುವುದು;

(vi) ವಿಜ್ಞಾನ ಮತ್ತು ಇಂಜಿನಿಯರಿಂಗ್‌ನಲ್ಲಿ ಮೂಲ ಸಂಶೋಧನೆಗೆ ಉತ್ತೇಜನ ನೀಡುವುದಕ್ಕಾಗಿ ಶೈಕ್ಷಣಿಕ ಸಂಸ್ಥೆಗಳು, ಸಂಶೋಧನೆ ಮತ್ತು ಅಭಿವೃದ್ಧಿ ಪ್ರಯೋಗಾಲಯಗಳು ಮತ್ತು ಕೈಗಾರಿಕೆಯ ನಡುವೆ ಸಹಯೋಗದಿಂದ ಸಮಷ್ಟಿ ಪರಿಣಾಮ ಸಾಧಿಸುವುದು;

(vii) ಆಧುನಿಕ ವ್ಯವಸ್ಥಾಪನಾ ಪದ್ಧತಿಗಳನ್ನು ಅಳವಡಿಸಿಕೊಳ್ಳುವ ಮೂಲಕ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನವೂ ಸೇರಿದಂತೆ ಸಂಶೋಧನೆಗೆ ತ್ವರಿತವಾಗಿ ನಿಧಿ ಒದಗಿಸುವ ವ್ಯವಸ್ಥಾಪನಾ ವ್ಯವಸ್ಥೆಯೊಂದನ್ನು ರೂಪಿಸುವುದು;

(viii) ಎಲ್ಲೆಲ್ಲಿ ಅಗತ್ಯವೆನಿಸುವುದೋ ಮತ್ತು ಅಪೇಕ್ಷಣೀಯವೆನಿಸುವುದೋ ಅಲ್ಲೆಲ್ಲಾ ಅಂತರಾಷ್ಟ್ರೀಯ ಸಹಭಾಗಿತ್ವ ಪ್ರಾಜೆಕ್ಟ್‌ಗಳಲ್ಲಿ ಭಾಗವಹಿಸುವಿಕೆಯನ್ನು ರೂಪಿಸುವುದು; ಮತ್ತು

(ix) ಅಸ್ತಿತ್ವದಲ್ಲಿರುವ ವಿಜ್ಞಾನ ಮತ್ತು ಇಂಜಿನಿಯರಿಂಗ್ ಸಂಶೋಧನಾ ಪರಿಷತ್ ಕಾರ್ಯಯೋಜನೆ ಮೇರೆಗೆ ಕೇಂದ್ರ ಸರ್ಕಾರವು ಕೈಗೊಂಡ ಅಥವಾ ನಿಧಿ ಒದಗಿಸಿರುವ ಮೂಲ ಸಂಶೋಧನಾ ಪ್ರಾಜೆಕ್ಟ್‌ಗಳನ್ನು ಮತ್ತು ಕಾರ್ಯಕ್ರಮಗಳನ್ನು ವಹಿಸಿಕೊಳ್ಳುವುದು ಮತ್ತು ಅವುಗಳನ್ನು ಮುಂದುವರಿಸುವುದು

- ಒಳಗೊಳ್ಳತಕ್ಕದ್ದು.

(3) ಮಂಡಳಿಯು, (2)ನೇ ಉಪ-ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ಉದ್ದೇಶಗಳಿಗಾಗಿ ವ್ಯಕ್ತಿಗಳಿಗೆ, ಶೈಕ್ಷಣಿಕ ಸಂಸ್ಥೆಗಳಿಗೆ, ಸಂಶೋಧನಾ ಮತ್ತು ಅಭಿವೃದ್ಧಿ ಪ್ರಯೋಗಾಲಯಗಳಿಗೆ, ಕೈಗಾರಿಕೆಗಳಿಗೆ ಮತ್ತು ಇತರ ಸಂಘ ಸಂಸ್ಥೆಗಳಿಗೆ ಅನುದಾನಗಳ ಮತ್ತು ಸಾಲಗಳ ರೂಪದಲ್ಲಿ ಹಣಕಾಸು ನೆರವನ್ನು ಒದಗಿಸಬಹುದು.

## ಅಧ್ಯಾಯ – III

### ಹಣಕಾಸು ನೆರವಿನ ಮಂಜೂರಾತಿಗಾಗಿ ಅರ್ಜಿ

**8. ಹಣಕಾಸು ನೆರವು ಪಡೆಯುವುದಕ್ಕಾಗಿ ಅರ್ಜಿ.–** (1) 7ನೇ ಪ್ರಕರಣದ (1)ನೇ ಉಪ-ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ಉದ್ದೇಶಗಳಿಗಾಗಿ ಹಣಕಾಸು ನೆರವು ಪಡೆಯುವುದಕ್ಕಾಗಿ ಮಂಡಳಿಗೆ ನಿಯಮಿಸಬಹುದಾದಂಥ ನಮೂನೆಯಲ್ಲಿ ಅರ್ಜಿ ಸಲ್ಲಿಸತಕ್ಕದ್ದು.

(2) ಮಂಡಳಿಯು, ಅರ್ಜಿಯನ್ನು ಪರಿಶೀಲಿಸಿದ ತರುವಾಯ ಮತ್ತು ತಾನು ಅಗತ್ಯವೆಂದು ಪರಿಗಣಿಸಿದಂಥ ವಿಚಾರಣೆಗಳನ್ನು ನಡೆಸಿದ ಅಥವಾ ಅಂಥ ಸ್ಪಷ್ಟೀಕರಣಗಳನ್ನು ಪಡೆದುಕೊಂಡ ತರುವಾಯ, ಲಿಖಿತ ಆದೇಶದ ಮೂಲಕ ಹಣಕಾಸು ನೆರವನ್ನು ಮಂಜೂರು ಮಾಡಬಹುದು ಅಥವಾ ಅದನ್ನು ನಿರಾಕರಿಸಬಹುದು.

## ಅಧ್ಯಾಯ – IV

### ಹಣಕಾಸು, ಲೆಕ್ಕಪತ್ರಗಳು ಮತ್ತು ಲೆಕ್ಕ ಪರಿಶೋಧನೆ

**9. ಕೇಂದ್ರ ಸರ್ಕಾರದಿಂದ ಅನುದಾನಗಳು ಮತ್ತು ಸಾಲಗಳು.–** ಕೇಂದ್ರ ಸರ್ಕಾರವು, ಈ ಬಗ್ಗೆ ಸಂಸತ್ತು ಕಾನೂನಿನ ಮೂಲಕ ಯುಕ್ತ ಧನವಿನಿಯೋಗ ಮಾಡಿದ ತರುವಾಯ, ಆ ಸರ್ಕಾರವು ಅವಶ್ಯವೆಂದು ಪರಿಗಣಿಸುವಂಥ ಹಣದ ಮೊತ್ತದಷ್ಟು ಅನುದಾನಗಳನ್ನು ಮತ್ತು ಸಾಲಗಳನ್ನು ಮಂಡಳಿಗೆ ನೀಡಬಹುದು.

**10. ವಿಜ್ಞಾನ ಮತ್ತು ಇಂಜಿನಿಯರಿಂಗ್ ಸಂಶೋಧನೆಗಾಗಿ ನಿಧಿ.–** (1) ವಿಜ್ಞಾನ ಮತ್ತು ಇಂಜಿನಿಯರಿಂಗ್ ಸಂಶೋಧನಾ ನಿಧಿ ಎಂದು ಕರೆಯಲಾಗುವ ಒಂದು ನಿಧಿಯನ್ನು ಸ್ಥಾಪಿಸತಕ್ಕದ್ದು, ಮತ್ತು ಆ ನಿಧಿಗೆ,–

(ಎ) ಕೇಂದ್ರ ಸರ್ಕಾರವು 9ನೇ ಪ್ರಕರಣದ ಮೇರೆಗೆ ಮಂಡಳಿಗೆ ನೀಡಿದ ಯಾವುವೇ ಅನುದಾನಗಳನ್ನು ಮತ್ತು ಸಾಲಗಳನ್ನು;

(ಬಿ) ಯಾವುದೇ ಇತರ ಮೂಲದಿಂದ ಬಂದ ದೇಣಿಗೆಗಳೂ ಸೇರಿದಂತೆ ಮಂಡಳಿಯು ಸ್ವೀಕರಿಸಿದ ಎಲ್ಲ ಮೊತ್ತಗಳನ್ನು;

(ಸಿ) ನಿಧಿಯಿಂದ ಮಂಜೂರಾದ ಮೊತ್ತಗಳನ್ನು ವಸೂಲಿ ಮಾಡಿದ್ದರಿಂದ ಬಂದ ಹಣವನ್ನು ಮತ್ತು

(ಡಿ) ನಿಧಿಯ ಮೊತ್ತವನ್ನು ಹೂಡಿದ್ದರಿಂದ ಬಂದ ಯಾವುದೇ ಆದಾಯವನ್ನು

– ಜಮೆ ಮಾಡತಕ್ಕದ್ದು.

(2) ಈ ನಿಧಿಯನ್ನು,–

(ಎ) ಈ ಅಧಿನಿಯಮದ ಮೂಲಕ ಅಧಿಕೃತಗೊಳಿಸಲಾದ ಗುರಿ ಮತ್ತು ಉದ್ದೇಶಗಳಿಗಾಗಿ ಮಾಡಿದ ವೆಚ್ಚಗಳನ್ನು ಭರಿಸಲು;

(ಬಿ) ಮಂಡಳಿಯ ಸದಸ್ಯರ, ಅಧಿಕಾರಿಗಳ ಮತ್ತು ಇತರ ನೌಕರರ ಸಂಬಳಗಳು, ಭತ್ಯೆಗಳು ಮತ್ತು ಇತರ ವೆಚ್ಚಗಳನ್ನು ಭರಿಸಲು;

(ಸಿ) ಸಮಾಲೋಚಕರಿಗೆ ಮತ್ತು ಸಂದರ್ಶಕ ವಿಜ್ಞಾನಿಗಳಿಗೆ ಸಂಭಾವನೆಗಳನ್ನು ನೀಡಲು; ಮತ್ತು

(ಡಿ) ಈ ಅಧಿನಿಯಮದ ಮೇರೆಗೆ ತನ್ನ ಪ್ರಕಾರ್ಯಗಳನ್ನು ನಿರ್ವಹಿಸುವಾಗ ಮಂಡಳಿಯ ವೆಚ್ಚಗಳನ್ನು ಭರಿಸಲು;

– ವಿನಿಯೋಗಿಸತಕ್ಕದ್ದು.

**11. ಆಯವ್ಯಯ ಪತ್ರ:** ಮಂಡಲಿಯು, ಪ್ರತಿ ಹಣಕಾಸು ವರ್ಷದಲ್ಲಿ, ನಿಯಮಿಸಬಹುದಾದಂಥ ನಮೂನೆಯಲ್ಲಿ ಮತ್ತು ಅಂಥ ಕಾಲದಲ್ಲಿ ಮುಂದಿನ ಹಣಕಾಸು ವರ್ಷಕ್ಕಾಗಿ ಮಂಡಳಿಯ ಅಂದಾಜು ಜಮೆ ಮತ್ತು ಖರ್ಚನ್ನು ತೋರಿಸುವಂಥ ತನ್ನ ಆಯವ್ಯಯ ಪತ್ರವನ್ನು ಸಿದ್ಧಪಡಿಸತಕ್ಕದ್ದು ಮತ್ತು ಅದನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು.

**12. ವಾರ್ಷಿಕ ವರದಿ.–** ಮಂಡಳಿಯು, ಪ್ರತಿಯೊಂದು ಹಣಕಾಸು ವರ್ಷದಲ್ಲಿ ನಿಯಮಿಸಬಹುದಾದಂಥ ನಮೂನೆಯಲ್ಲಿ ಮತ್ತು ಅಂಥ ಕಾಲದಲ್ಲಿ ಹಿಂದಿನ ಹಣಕಾಸು ವರ್ಷದ ಅವಧಿಯಲ್ಲಿನ ತನ್ನ ಕಾರ್ಯ ಚಟುವಟಿಕೆಗಳ ಪೂರ್ಣ ಚಿತ್ರಣವನ್ನು ನೀಡುವ, ತನ್ನ ವಾರ್ಷಿಕ ವರದಿಯನ್ನು ಸಿದ್ಧಪಡಿಸತಕ್ಕದ್ದು ಮತ್ತು ಅದರ ಒಂದು ಪ್ರತಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**13. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ಮಂಡಳಿಯು, ಸರಿಯಾದ ಲೆಕ್ಕಪತ್ರಗಳನ್ನು ಮತ್ತು ಇತರೆ ಸಂಬಂಧಪಟ್ಟ ದಾಖಲೆಗಳನ್ನು ಇಡತಕ್ಕದ್ದು ಮತ್ತು ಕೇಂದ್ರ ಸರ್ಕಾರವು ಭಾರತದ ಲೆಕ್ಕ ನಿಯಂತ್ರಕ – ಹಾಗೂ – ಮಹಾ ಲೆಕ್ಕಪರಿಶೋಧಕನೊಂದಿಗೆ ಸಮಾಲೋಚಿಸಿ, ನಿಯಮಿಸಬಹುದಾದಂಥ ನಮೂನೆಗಳಲ್ಲಿ ಲೆಕ್ಕಪತ್ರಗಳ ವಾರ್ಷಿಕ ವಿವರಣ ಪಟ್ಟಿಯನ್ನು ಸಿದ್ಧಪಡಿಸತಕ್ಕದ್ದು.

(2) ಭಾರತದ ಲೆಕ್ಕ ನಿಯಂತ್ರಕ – ಹಾಗೂ – ಮಹಾ ಲೆಕ್ಕಪರಿಶೋಧಕನು ಅಥವಾ ಈ ಅಧಿನಿಯಮದ ಮೇರೆಗೆ ಮಂಡಳಿಯ ಲೆಕ್ಕಪತ್ರಗಳ ಲೆಕ್ಕಪರಿಶೋಧನೆಯ ಸಂಬಂಧದಲ್ಲಿ ಅವನಿಂದ ನೇಮಕಗೊಂಡ ಯಾರೇ ಇತರ ವ್ಯಕ್ತಿಯು, ಸರ್ಕಾರದ ಲೆಕ್ಕಪತ್ರಗಳ ಲೆಕ್ಕಪರಿಶೋಧನೆಗೆ ಸಂಬಂಧಿಸಿದಂತೆ ಭಾರತದ ಲೆಕ್ಕ ನಿಯಂತ್ರಕ – ಹಾಗೂ – ಮಹಾ ಲೆಕ್ಕಪರಿಶೋಧಕನು ಹೊಂದಿರುವಂತಹವೇ ಹಕ್ಕುಗಳನ್ನು ಮತ್ತು ವಿಶೇಷಾಧಿಕಾರಗಳನ್ನು ಹಾಗೂ ಅಧಿಕಾರವನ್ನು ಅಂಥ ಲೆಕ್ಕ ಪರಿಶೋಧನೆಯ ಸಂಬಂಧದಲ್ಲಿ ಹೊಂದಿರತಕ್ಕದ್ದು, ಹಾಗೂ ವಿಶೇಷವಾಗಿ, ಈ ಅಧಿನಿಯಮದ ಮೇರೆಗೆ ಮಂಡಳಿಯ ಪುಸ್ತಕಗಳನ್ನು, ಲೆಕ್ಕಪತ್ರಗಳನ್ನು, ಸಂಬಂಧಪಟ್ಟ ವೋಚರುಗಳನ್ನು ಮತ್ತು ಇತರ ದಸ್ತಾವೇಜುಗಳನ್ನು ಹಾಗೂ ಕಾಗದಪತ್ರಗಳನ್ನು ಹಾಜರುಪಡಿಸುವಂತೆ ತಗಾದೆ ಮಾಡುವ ಮತ್ತು ಮಂಡಳಿಯ ಯಾವುದೇ ಕಚೇರಿಯನ್ನು ತಪಾಸಣೆ ಮಾಡುವ ಹಕ್ಕನ್ನು ಹೊಂದಿರತಕ್ಕದ್ದು.

(3) ಮಂಡಳಿಯ ಲೆಕ್ಕಪತ್ರಗಳನ್ನು ಭಾರತದ ಲೆಕ್ಕ ನಿಯಂತ್ರಕ – ಹಾಗೂ – ಮಹಾಲೆಕ್ಕಪರಿಶೋಧಕನು ಪ್ರತಿ ವರ್ಷ ಲೆಕ್ಕ ಪರಿಶೋಧನೆ ಮಾಡತಕ್ಕದ್ದು ಹಾಗೂ ಅಂಥ ಲೆಕ್ಕ ಪರಿಶೋಧನೆಯ ಸಂಬಂಧದಲ್ಲಿ ಭರಿಸಿದ

ಯಾವುದೇ ವೆಚ್ಚವನ್ನು ಮಂಡಳಿಯು ಲೆಕ್ಕ ನಿಯಂತ್ರಕ – ಹಾಗೂ – ಮಹಾ ಲೆಕ್ಕಪರಿಶೋಧಕನಿಗೆ ಸಂದಾಯ ಮಾಡತಕ್ಕದ್ದು.

(4) ಮಂಡಳಿಯು ಲೆಕ್ಕಪರಿಶೋಧಕನ ವರದಿಯೊಂದಿಗೆ ತನ್ನ ಲೆಕ್ಕಪತ್ರಗಳ ಪರಿಶೋಧಿತ ಪ್ರತಿಯನ್ನು ನಿಯಮಿಸಬಹುದಾದಂಥ ದಿನಾಂಕಕ್ಕಿಂತ ಮುಂಚೆ ಕೇಂದ್ರ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**14. ವಾರ್ಷಿಕ ವರದಿಯನ್ನು ಮತ್ತು ಲೆಕ್ಕಪರಿಶೋಧಕನ ವರದಿಯನ್ನು ಸಂಸತ್ತಿನ ಮುಂದೆ ಮಂಡಿಸುವುದು.–** ಕೇಂದ್ರ ಸರ್ಕಾರವು, ವಾರ್ಷಿಕ ವರದಿಯನ್ನು ಮತ್ತು ಲೆಕ್ಕಪರಿಶೋಧಕನ ವರದಿಯನ್ನು ತಾನು ಸ್ವೀಕರಿಸಿದ ತರುವಾಯ, ಆದಷ್ಟು ಬೇಗನೆ ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಅವುಗಳನ್ನು ಇಡುವಂತೆ ಮಾಡತಕ್ಕದ್ದು.

## ಅಧ್ಯಾಯ – V

## ಸಂಕೀರ್ಣ

**15. ಮಂಡಳಿಗೆ ವಿವರಪಟ್ಟಿಕೆಗಳನ್ನು ಒದಗಿಸುವುದು.–** (1) ಮಂಡಳಿಯಿಂದ ಹಣಕಾಸು ನೆರವನ್ನು ಪಡೆಯುತ್ತಿರುವ ಕೈಗಾರಿಕಾ ಸಂಸ್ಥೆಯು ಅಥವಾ ಸಂಸ್ಥೆಯು ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ನಮೂನೆಯಲ್ಲಿ ಮತ್ತು ಅಂಥ ಕಾಲದಲ್ಲಿ ಮಂಡಳಿಗೆ ವಿವರಪಟ್ಟಿಕೆಯನ್ನು ಒದಗಿಸತಕ್ಕದ್ದು.

(2) ಮಂಡಳಿಯು, ಈ ಪ್ರಕರಣದ ಮೇರೆಗೆ ಸಲ್ಲಿಸಿದ ಯಾವುದೇ ವಿವರಪಟ್ಟಿಕೆಯ ಯಥಾರ್ಥತೆಯನ್ನು ಪರೀಶೀಲಿಸಲು ಯಾವುದೇ ಕಾಲದಲ್ಲಿ, (1)ನೇ ಉಪ–ಪ್ರಕರಣದಲ್ಲಿ ತಿಳಿಸಿದ ಯಾವುದೇ ಕೈಗಾರಿಕಾ ಸಂಸ್ಥೆಗೆ ಅಥವಾ ಸಂಸ್ಥೆಗೆ ಭೇಟಿ ನೀಡುವುದಕ್ಕಾಗಿ ಒಬ್ಬ ಅಧಿಕಾರಿಯನ್ನು ಅಧಿಕೃತಗೊಳಿಸಬಹುದು.

**16. ನಿರ್ದೇಶನಗಳನ್ನು ನೀಡಲು ಕೇಂದ್ರ ಸರ್ಕಾರದ ಅಧಿಕಾರ.–** (1)ಈ ಅಧಿನಿಯಮದ ಹಿಂದೆ ಹೇಳಿದ ಉಪಬಂಧಗಳಿಗೆ ಬಾಧಕವಾಗದಂತೆ, ಮಂಡಳಿಯು, ಈ ಅಧಿನಿಯಮದ ಮೇರೆಗೆ ತನ್ನ ಪ್ರಕಾರ್ಯಗಳನ್ನು ಮತ್ತು ಕರ್ತವ್ಯಗಳನ್ನು ನಿರ್ವಹಿಸುವಾಗ ಕಾರ್ಯ ನೀತಿಯ ಪ್ರಶ್ನೆಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವು ಕಾಲಕಾಲಕ್ಕೆ ಲಿಖಿತದಲ್ಲಿ ನೀಡಬಹುದಾದಂಥ ನಿರ್ದೇಶನಗಳಿಗೆ ಬದ್ಧವಾಗಿರತಕ್ಕದ್ದು:

ಪರಂತು, ಈ ಉಪ–ಪ್ರಕರಣದ ಮೇರೆಗೆ ಯಾವುದೇ ನಿರ್ದೇಶನವನ್ನು ನೀಡುವುದಕ್ಕೆ ಮುಂಚೆ ಕಾರ್ಯ ಸಾಧ್ಯವಾದಷ್ಟು ಮಟ್ಟಿಗೆ ಮಂಡಳಿಗೆ ಅದರ ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಅವಕಾಶವನ್ನು ನೀಡತಕ್ಕದ್ದು.

(2) ಒಂದು ಪ್ರಶ್ನೆಯು ಕಾರ್ಯ ನೀತಿಗೆ ಸಂಬಂಧಿಸಿದ್ದೇ ಅಥವಾ ಅಲ್ಲವೇ ಎಂಬ ಬಗ್ಗೆ ಕೇಂದ್ರ ಸರ್ಕಾರದ ತೀರ್ಮಾನವೇ ಅಂತಿಮವಾದುದಾಗಿರತಕ್ಕದ್ದು.

**17. ಮಂಡಳಿಯನ್ನು ರದ್ದುಗೊಳಿಸಲು ಕೇಂದ್ರ ಸರ್ಕಾರದ ಅಧಿಕಾರ.–** (1) ಕೇಂದ್ರ ಸರ್ಕಾರವು ಯಾವುದೇ ಕಾಲದಲ್ಲಿ,–

(ಎ) ತೀವ್ರ ತುರ್ತು ಪರಿಸ್ಥಿತಿಯ ಕಾರಣದಿಂದ, ಮಂಡಳಿಯು ಈ ಅಧಿನಿಯಮದ ಉಪಬಂಧಗಳ ಮೂಲಕ ಅಥವಾ ಮೇರೆಗೆ ವಹಿಸಿದ ಪ್ರಕಾರ್ಯಗಳನ್ನು ಮತ್ತು ಕರ್ತವ್ಯಗಳನ್ನು ನಿರ್ವಹಿಸಲು ಅಸಮರ್ಥವಾಗಿದೆ ಎಂದು; ಅಥವಾ

(ಬಿ) ಮಂಡಳಿಯು, ಈ ಅಧಿನಿಯಮದ ಮೇರೆಗೆ ಕೇಂದ್ರ ಸರ್ಕಾರವು ನೀಡಿದ ಯಾವುದೇ ನಿರ್ದೇಶನವನ್ನು ಪಾಲಿಸುವಲ್ಲಿ ಅಥವಾ ಈ ಅಧಿನಿಯಮದ ಉಪಬಂಧಗಳ ಮೂಲಕ ಅಥವಾ ಮೇರೆಗೆ ತನಗೆ ವಹಿಸಿದ ಪ್ರಕಾರ್ಯಗಳನ್ನು ಮತ್ತು ಕರ್ತವ್ಯಗಳನ್ನು ನಿರ್ವಹಿಸುವಲ್ಲಿ ಸತತವಾಗಿ ಲೋಪವೆಸಗಿದೆಯೆಂದು ಮತ್ತು ಅಂಥ ಲೋಪದ ಪರಿಣಾಮವಾಗಿ ಮಂಡಳಿಯ ಹಣಕಾಸು ಸ್ಥಿತಿಯು ಅಥವಾ ಆಡಳಿತವು ಅವನತಿ ಹೊಂದಿದೆಯೆಂದು; ಅಥವಾ

(ಸಿ) ಸಾರ್ವಜನಿಕ ಹಿತದೃಷ್ಟಿಯಿಂದ, ಮಂಡಲಿಯನ್ನು ರದ್ದುಪಡಿಸುವಂಥ ಸನ್ನಿವೇಶಗಳು ಉದ್ಭವಿಸಿವೆಯೆಂದು

-ಅಭಿಪ್ರಾಯ ಪಟ್ಟರೆ, ಕೇಂದ್ರ ಸರ್ಕಾರವು ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ, ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಆರು ತಿಂಗಳುಗಳನ್ನು ಮೀರದಂಥ ಅವಧಿಗೆ ಮಂಡಳಿಯನ್ನು ರದ್ದುಗೊಳಿಸಬಹುದು.

(2) (1)ನೇ ಉಪ ಪ್ರಕರಣದ ಮೇರೆಗೆ ಮಂಡಳಿಯನ್ನು ರದ್ದುಗೊಳಿಸುವ ಅಧಿಸೂಚನೆಯನ್ನು ಪ್ರಕಟಿಸಿದ ನಂತರ,-

(ಎ) ಅಂಥ ರದ್ದಿಯಾತಿಯ ದಿನಾಂಕದಿಂದ ಎಲ್ಲ ಸದಸ್ಯರು ತಮ್ಮ ಪದಗಳನ್ನು ತೆರವು ಮಾಡತಕ್ಕದ್ದು.

(ಬಿ) ಈ ಅಧಿನಿಯಮದ ಉಪಬಂಧಗಳ ಮೂಲಕ ಅಥವಾ ಮೇರೆಗೆ ಮಂಡಳಿಯು ಅಥವಾ ಅದರ ಪರವಾಗಿ ಚಲಾಯಿಸಬಹುದಾದ ಅಥವಾ ನಿರ್ವಹಿಸಬಹುದಾದ ಎಲ್ಲ ಅಧಿಕಾರಗಳನ್ನು ಅಥವಾ ಎಲ್ಲ ಪ್ರಕಾರ್ಯಗಳನ್ನು ಮತ್ತು ಕರ್ತವ್ಯಗಳನ್ನು (3)ನೇ ಉಪ-ಪ್ರಕರಣದ ಮೇರೆಗೆ ಮಂಡಳಿಯನ್ನು ಪುನಃ ರಚಿಸುವವರೆಗೆ, ಕೇಂದ್ರ ಸರ್ಕಾರವು ನಿರ್ದೇಶಿಸಬಹುದಾದಂಥ ವ್ಯಕ್ತಿಯು ಅಥವಾ ವ್ಯಕ್ತಿಗಳು ಚಲಾಯಿಸತಕ್ಕದ್ದು ಮತ್ತು ನಿರ್ವಹಿಸತಕ್ಕದ್ದು.

(ಸಿ) ಮಂಡಳಿಯ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಎಲ್ಲ ಸ್ವತ್ತು, (3)ನೇ ಉಪ-ಪ್ರಕರಣದ ಮೇರೆಗೆ ಮಂಡಳಿಯನ್ನು ಪುನಃ ರಚಿಸುವವರೆಗೆ ಕೇಂದ್ರ ಸರ್ಕಾರದಲ್ಲಿ ನಿಹಿತವಾಗತಕ್ಕದ್ದು.

(3) (1)ನೇ ಉಪ-ಪ್ರಕರಣದ ಮೇರೆಗೆ ಹೊರಡಿಸಿದ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಿದ ರದ್ದಿಯಾತಿಯ ಅವಧಿಯು ಮುಕ್ತಾಯವಾದ ನಂತರ ಕೇಂದ್ರ ಸರ್ಕಾರವು ಹೊಸ ನೇಮಕದ ಮೂಲಕ ಮಂಡಳಿಯನ್ನು ಪುನಃ ರಚಿಸಬಹುದು ಮತ್ತು ಅಂಥ ಸಂದರ್ಭದಲ್ಲಿ, (2)ನೇ ಉಪ-ಪ್ರಕರಣದ (ಎ) ಖಂಡದ ಮೇರೆಗೆ ತಮ್ಮ ಪದಗಳನ್ನು ತೆರವು ಮಾಡಿದಂಥ ಯಾರೇ ವ್ಯಕ್ತಿಯು ಅಥವಾ ವ್ಯಕ್ತಿಗಳು ನೇಮಕಕ್ಕೆ ಅನರ್ಹರಾಗಿರುವರೆಂದು ಭಾವಿಸತಕ್ಕದ್ದಲ್ಲ:

ಪರಂತು, ಕೇಂದ್ರ ಸರ್ಕಾರವು, ರದ್ದಿಯಾತಿಯ ಅವಧಿಯು ಮುಕ್ತಾಯವಾಗುವುದಕ್ಕೆ ಮುಂಚೆ, ಯಾವುದೇ ಕಾಲದಲ್ಲಿ ಈ ಉಪ ಪ್ರಕರಣದ ಮೇರೆಗೆ ಕ್ರಮ ಕೈಗೊಳ್ಳಬಹುದು.

(4) ಕೇಂದ್ರ ಸರ್ಕಾರವು (1)ನೇ ಉಪ-ಪ್ರಕರಣದ ಮೇರೆಗೆ ಹೊರಡಿಸಿದ ಅಧಿಸೂಚನೆಯನ್ನು ಮತ್ತು ಈ ಪ್ರಕರಣದ ಮೇರೆಗೆ ತೆಗೆದುಕೊಂಡ ಯಾವುದೇ ಕ್ರಮದ ಹಾಗೂ ಅಂಥ ಕ್ರಮಕ್ಕೆ ಎಡೆಮಾಡಿಕೊಟ್ಟ ಸಂದರ್ಭಗಳ ಬಗೆಗಿನ ಪೂರ್ಣ ವರದಿಯನ್ನು ಆದಷ್ಟು ಬೇಗನೆ ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಇಡುವಂತೆ ಮಾಡತಕ್ಕದ್ದು.

**18. ಪ್ರತ್ಯಾಯೋಜನೆ.–** ಮಂಡಳಿಯು, ಸಾಮಾನ್ಯ ಅಥವಾ ವಿಶೇಷ ಲಿಖಿತ ಆದೇಶದ ಮೂಲಕ, ಆ ಆದೇಶದಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಯಾವುವೇ ಷರತ್ತುಗಳು ಮತ್ತು ಪರಿಮಿತಿಗಳು ಇದ್ದಲ್ಲಿ, ಅವುಗಳಿಗೆ ಒಳಪಟ್ಟು, ತಾನು ಅವಶ್ಯವೆಂದು ಭಾವಿಸಬಹುದಾದಂಥ ಈ ಅಧಿನಿಯಮದ ಮೇರೆಗಿನ ತನ್ನ ಅಧಿಕಾರಗಳನ್ನು ಮತ್ತು ಪ್ರಕಾರ್ಯಗಳನ್ನು (21ನೇ ಪ್ರಕರಣದ ಮೇರೆಗಿನ ಅಧಿಕಾರವನ್ನು ಹೊರತುಪಡಿಸಿ) ಮಂಡಳಿಯ ಅಧ್ಯಕ್ಷನಿಗೆ ಅಥವಾ ಯಾರೇ ಇತರ ಸದಸ್ಯನಿಗೆ ಅಥವಾ ಯಾರೇ ಅಧಿಕಾರಿಗೆ ಪ್ರತ್ಯಾಯೋಜಿಸಬಹುದು.

**19. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.–** ಈ ಅಧಿನಿಯಮದ ಅಥವಾ ಅದರ ಮೇರೆಗೆ ರಚಿಸಿದ ನಿಯಮಗಳ ಅಥವಾ ವಿನಿಯಮಗಳ ಮೇರೆಗೆ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ, ಕೇಂದ್ರ ಸರ್ಕಾರದ ಅಥವಾ ಮಂಡಳಿಯ ಅಥವಾ ಅದು ನೇಮಕ ಮಾಡಿದ ಯಾವುದೇ ಸಮಿತಿಯ ಅಥವಾ ಮಂಡಳಿಯ ಅಥವಾ ಅಂಥ ಸಮಿತಿಯ ಯಾರೇ ಸದಸ್ಯನ ಅಥವಾ ಸರ್ಕಾರದ ಅಥವಾ ಮಂಡಳಿಯ ಯಾರೇ ಅಧಿಕಾರಿಯ ಅಥವಾ ನೌಕರನ, ಅಥವಾ ಕೇಂದ್ರ ಸರ್ಕಾರವು ಅಥವಾ ಮಂಡಳಿಯು ಅಧಿಕೃತಗೊಳಿಸಿದ ಯಾರೇ ಇತರ ವ್ಯಕ್ತಿಯ ವಿರುದ್ಧ ಯಾವುದೇ ಪ್ರಾಸಿಕ್ಯೂಷನನ್ನು ಅಥವಾ ಇತರ ಕಾನೂನು ವ್ಯವಹರಣೆಯನ್ನು ಹೂಡತಕ್ಕದ್ದಲ್ಲ.

**20. ನಿಯಮಗಳನ್ನು ರಚಿಸಲು ಕೇಂದ್ರ ಸರ್ಕಾರದ ಅಧಿಕಾರ.–** (1) ಕೇಂದ್ರ ಸರ್ಕಾರವು, ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ ನಿಯಮಗಳನ್ನು ರಚಿಸಬಹುದು.

(2) ಈ ಹಿಂದೆ ಹೇಳಿದ ಅಧಿಕಾರದ ಸಾಮಾನ್ಯ ಅನ್ವಯಕ್ಕೆ ಬಾಧಕವಾಗದಂತೆ, ಅಂಥ ನಿಯಮಗಳು ಈ ಮುಂದಿನ ಎಲ್ಲ ಅಥವಾ ಯಾವುದೇ ವಿಷಯಗಳಿಗೆ ಉಪಬಂಧ ಕಲ್ಪಿಸಬಹುದು, ಎಂದರೆ:–

(ಎ) 3ನೇ ಪ್ರಕರಣದ (5)ನೇ ಉಪ-ಪ್ರಕರಣದ ಮೇರೆಗೆ, ಮಂಡಳಿಯ ಸದಸ್ಯರ ಅರ್ಹತೆಗಳು ಮತ್ತು ಅನುಭವ, ಪದಾವಧಿ ಮತ್ತು ಇತರ ಭತ್ಯೆಗಳು;

(ಬಿ) 3ನೇ ಪ್ರಕರಣದ (6)ನೇ ಉಪ-ಪ್ರಕರಣದ ಮೇರೆಗೆ ಅಧ್ಯಕ್ಷನ ಅಧಿಕಾರಗಳು ಮತ್ತು ಕರ್ತವ್ಯಗಳು;

(ಸಿ) 5ನೇ ಪ್ರಕರಣದ ಮೇರೆಗೆ ಉಸ್ತುವಾರಿ ಸಮಿತಿಯ ರಚನೆ;

(ಡಿ) 6ನೇ ಪ್ರಕರಣದ (1)ನೇ ಉಪ-ಪ್ರಕರಣದ ಮೇರೆಗೆ ಸಮಿತಿಗಳ ರಚನೆ;

(ಇ) 8ನೇ ಪ್ರಕರಣದ (1)ನೇ ಉಪ-ಪ್ರಕರಣದ ಮೇರೆಗೆ ಅರ್ಜಿಯ ನಮೂನೆ;

(ಎಫ್) ಮಂಡಳಿಯು 11ನೇ ಪ್ರಕರಣದ ಮೇರೆಗೆ ತನ್ನ ಆಯವ್ಯಯ ಪತ್ರವನ್ನು ಮತ್ತು 12ನೇ ಪ್ರಕರಣದ ಮೇರೆಗೆ ತನ್ನ ವಾರ್ಷಿಕ ವರದಿಯನ್ನು ಯಾವ ನಮೂನೆಯಲ್ಲಿ ಮತ್ತು ಯಾವ ಕಾಲದಲ್ಲಿ ಸಿದ್ಧಪಡಿಸತಕ್ಕದ್ದೋ, ಆ ನಮೂನೆ ಮತ್ತು ಆ ಕಾಲ;

(ಜಿ) 13ನೇ ಪ್ರಕರಣದ (1)ನೇ ಉಪ–ಪ್ರಕರಣದ ಮೇರೆಗೆ ವಾರ್ಷಿಕ ಲೆಕ್ಕಪತ್ರಗಳ ವಿವರಣ ಪಟ್ಟಿಯ ನಮೂನೆ ಮತ್ತು ಆ ಪ್ರಕರಣದ (4)ನೇ ಉಪ–ಪ್ರಕರಣದ ಮೇರೆಗೆ ಕೇಂದ್ರ ಸರ್ಕಾರಕ್ಕೆ ಸಲ್ಲಿಸಬಹುದಾದ ಲೆಕ್ಕಪತ್ರಗಳ ಲೆಕ್ಕಪರಿಶೋಧಿತ ಪ್ರತಿಯನ್ನು ಯಾವ ದಿನಾಂಕಕ್ಕೆ ಮುಂಚೆ ಸಲ್ಲಿಸಬೇಕೋ ಆ ದಿನಾಂಕ;

(ಹೆಚ್) ನಿಯಮಗಳ ಮೂಲಕ ನಿಯಮಿಸಬೇಕಾದ ಅಥವಾ ನಿಯಮಿಸಬಹುದಾದ ಅಥವಾ ಯಾವ ವಿಷಯದ ಸಂಬಂಧದಲ್ಲಿ ಉಪಬಂಧವನ್ನು ಕಲ್ಪಿಸಬೇಕಾಗಿದೆಯೋ ಅಥವಾ ಕಲ್ಪಿಸಬಹುದಾಗಿದೆಯೋ ಆ ಯಾವುದೇ ಇತರ ವಿಷಯ.

**21. ವಿನಿಯಮಗಳನ್ನು ರಚಿಸಲು ಮಂಡಳಿಯ ಅಧಿಕಾರ.–** (1) ಮಂಡಳಿಯು, ಕೇಂದ್ರ ಸರ್ಕಾರದ ಪೂರ್ವಾನುಮೋದನೆಪಡೆದು, ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ ಸಾಮಾನ್ಯವಾಗಿ ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ಈ ಅಧಿನಿಯಮಕ್ಕೆ ಮತ್ತು ನಿಯಮಗಳಿಗೆ ಸುಸಂಗತವಾದ ವಿನಿಯಮಗಳನ್ನು ರಚಿಸಬಹುದು.

(2) ವಿಶೇಷವಾಗಿ, ಮತ್ತು ಮೇಲೆ ಹೇಳಿದ ಅಧಿಕಾರದ ಸಾಮಾನ್ಯ ಅನ್ವಯಕ್ಕೆ ಬಾಧಕವಾಗದಂತೆ, ಅಂಥ ವಿನಿಯಮಗಳು ಈ ಮುಂದಿನ ಎಲ್ಲಾ ಅಥವಾ ಯಾವುದೇ ವಿಷಯಕ್ಕೆ ಉಪಬಂಧ ಕಲ್ಪಿಸಬಹುದು, ಎಂದರೆ:–

(ಎ) 4ನೇ ಪ್ರಕರಣದ (2)ನೇ ಉಪ–ಪ್ರಕರಣದ ಮೇರೆಗೆ ಮಂಡಳಿಯ ಕಾರ್ಯದರ್ಶಿಯ ಮತ್ತು ಇತರ ಅಧಿಕಾರಿಗಳ ಹಾಗೂ ನೌಕರರ ಸಂಬಳ ಮತ್ತು ಭತ್ಯೆಗಳೂ ಸೇರಿದಂತೆ ಅವರ ಅರ್ಹತೆಗಳು ಮತ್ತು ಅನುಭವ, ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(ಬಿ) 15ನೇ ಪ್ರಕರಣದ (1)ನೇ ಉಪ–ಪ್ರಕರಣದ ಮೇರೆಗೆ ಮಂಡಳಿಗೆ ಯಾವ ನಮೂನೆಯಲ್ಲಿ ಮತ್ತು ಕಾಲದಲ್ಲಿ ವಿವರಪಟ್ಟಿಕೆಗಳನ್ನು ಒದಗಿಸಬಹುದೋ ಆ ನಮೂನೆ ಮತ್ತು ಆ ಕಾಲ.

**22. ನಿಯಮಗಳನ್ನು ಮತ್ತು ವಿನಿಯಮಗಳನ್ನು ಸಂಸತ್ತಿನ ಮುಂದೆ ಇಡುವುದು.–** ಈ ಅಧಿನಿಯಮದ ಮೇರೆಗೆ ರಚಿಸಿದ ಪ್ರತಿಯೊಂದು ನಿಯಮವನ್ನು ಮತ್ತು ಪ್ರತಿಯೊಂದು ವಿನಿಯಮವನ್ನು, ಅದನ್ನು ರಚಿಸಿದ ತರುವಾಯ ಆದಷ್ಟು ಬೇಗನೆ, ಸಂಸತ್ತಿನ ಪ್ರತಿಯೊಂದು ಸದನದ ಮುಂದೆ, ಅದು ಅಧಿವೇಶನದಲ್ಲಿರುವಾಗ, ಒಂದು ಅಧಿವೇಶನದಲ್ಲಿ ಅಥವಾ ಒಂದಾದ ಮೇಲೊಂದರಂತೆ ಅನುಕ್ರಮವಾಗಿ ಬರುವ ಎರಡು ಅಥವಾ ಹೆಚ್ಚು ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಇಡತಕ್ಕದ್ದು ಮತ್ತು ಹಿಂದೆ ಹೇಳಿದ ಅಧಿವೇಶನವು ಅಥವಾ ಒಂದಾದ ಮೇಲೊಂದರಂತೆ ಅನುಕ್ರಮವಾಗಿ ಬರುವ ಅಧಿವೇಶನಗಳ ನಿಕಟೋತ್ತರದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮುಂಚೆ ಆ ನಿಯಮದಲ್ಲಿ ಅಥವಾ ವಿನಿಯಮದಲ್ಲಿ ಯಾವುದೇ ಮಾರ್ಪಾಡನ್ನು ಮಾಡಬೇಕೆಂದು ಎರಡೂ ಸದನಗಳು ಒಪ್ಪಿದರೆ ಅಥವಾ ಆ ನಿಯಮವನ್ನು ಮತ್ತು

ವಿನಿಯಮವನ್ನು ಮಾಡಕೂಡದೆಂದು ಎರಡೂ ಸದನಗಳು ಒಪ್ಪಿದರೆ, ಆ ತರುವಾಯ ಆ ನಿಯಮವು ಅಥವಾ ವಿನಿಯಮವು ಸಂದರ್ಭಾನುಸಾರ ಹಾಗೆ ಮಾರ್ಪಾಟಾದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗಿರತಕ್ಕದ್ದು ಅಥವಾ ಪರಿಣಾಮಕಾರಿಯಾಗಿರತಕ್ಕದ್ದಲ್ಲ; ಆದಾಗ್ಯೂ , ಅಂಥ ಯಾವುದೇ ಮಾರ್ಪಾಟು ಅಥವಾ ರದ್ದಿಯಾತಿಯು, ಆ ನಿಯಮದ ಅಥವಾ ವಿನಿಯಮದ ಮೇರೆಗೆ ಈ ಹಿಂದೆ ಮಾಡಿದ ಯಾವುದೇ ಕಾರ್ಯದ ಸಿಂಧುತ್ವಕ್ಕೆ ಬಾಧಕವನ್ನುಂಟು ಮಾಡತಕ್ಕದ್ದಲ್ಲ.

* * * * *